## ಪ್ರಧಾನ ಸಿವಿಲ್ ನ್ಯಾಯಾಧೀಶರ ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ನಂಜನಗೂಡು, ಮೈಸೂರು ಜಿಲ್ಲೆ.

## ಸಿ.ಸಿ.ನಂ. 315/2015

| | | |
|---|---|---|
| ಸಾಕ್ಷಿದಾರರ ಹೆಸರು | : | ಎನ್ ಜಯಕುಮಾರ್ |
| ತಂದೆಯ ಹೆಸರು | : | ಆರ್ ನಾಗರಾಜು |
| ವಯಸ್ಸು | : | 44 ವರ್ಷ |
| ಉದ್ಯೋಗ | : | ಪೊಲೀಸ್ ನಿರೀಕ್ಷಕರು, ಗುಂಡ್ಲುಪೇಟೆ ಪೊಲೀಸ್ ಠಾಣೆ |
| ವಾಸಸ್ಥಳ | : | ಗುಂಡ್ಲುಪೇಟೆ. |

**ಸಾಕ್ಷಿಯನ್ನು ದಿನಾಂಕಃ 16.05.2025 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಎ.ಪಿ.ಪಿ. ರವರಿಂದಃ**

ನಾನು ಸೆಪ್ಟೆಂಬರ್ 2012 ರಿಂದ ಏಪ್ರಿಲ್ 2015 ರವರೆಗೆ ಹುಲ್ಲಹಳ್ಳಿ ಪೊಲೀಸ್ ಠಾಣೆಯಲ್ಲಿ ಪೊಲೀಸ್ ಉಪನಿರೀಕ್ಷಕನಾಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿನಾಂಕ 30.09.2014 ರಂದು ನಾನು ಠಾಣಾ ಪ್ರಭಾರ ಕರ್ತವ್ಯದಲ್ಲಿದ್ದಾಗ ಚಾಸಾ-13 ರವರು ಆಸ್ಪತ್ರೆಯಲ್ಲಿ ದಾಖಲಾಗಿ ಚಿಕಿತ್ಸೆ ಪಡೆಯುತ್ತಿದ್ದ ಚಾಸಾ-1 ರವರ ನಿಪಿ-1 ರಂತೆ ಹೇಳಿಕೆ ದೂರನ್ನು ಪಡೆದು ನನ್ನ ಮುಂದೆ ಹಾಜರುಪಡಿಸಿದ್ದು, ನಂತರ ನಾನು ಠಾಣಾ ಮೊಕದ್ದಮೆ ಸಂಖ್ಯೆಃ 133/2014 ರಂತೆ ಪ್ರಥಮ ವರ್ತಮಾನ ವರದಿ ದಾಖಲಿಸಿರುತ್ತೇನೆ. ಸಾಕ್ಷಿಯು ನಿ.ಪಿ-1 ರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದರಿಂದ, ಸಾಕ್ಷಿಯ ಸಹಿಯನ್ನು ನಿ.ಪಿ-1(ಬಿ) ಎಂದು ಗುರುತಿಸಲಾಯಿತು. ಪ್ರಥಮ ವರ್ತಮಾನ ವರದಿಯನ್ನು ಈಗ ನೋಡುತ್ತಿದ್ದೇನೆ. ಸಾಕ್ಷಿಯು ಪ್ರಥಮ ವರ್ತಮಾನ ವರದಿಯನ್ನು ನೋಡಿ ಗುರುತಿಸಿದ್ದರಿಂದ ಪ್ರಥಮ ವರ್ತಮಾನ ವರದಿಯನ್ನು ನಿ.ಪಿ-9 ಎಂದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿ.ಪಿ-9(ಎ) ಎಂದು

ಗುರುತಿಸಲಾಯಿತು. ಅದೇ ದಿವಸ ಘಟನಾ ಸ್ಥಳಕ್ಕೆ ಭೇಟಿ ನೀಡಿ ಫ್ರಾಸಾ-2 ರವರು ತೋರಿಸಿಕೊಟ್ಟಂತೆ ನಿಪಿ-2 ರಂತೆ ಮಹಜರ್ ಕ್ರಮ ಜರುಗಿಸಿರುತ್ತೇನೆ. ಸಾಕ್ಷಿಯು ನಿ.ಪಿ-2 ರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದರಿಂದ, ಸಾಕ್ಷಿಯ ಸಹಿಯನ್ನು ನಿ.ಪಿ-2(ಡಿ) ಎಂದು ಗುರುತಿಸಲಾಯಿತು.

ದಿನಾಂಕ 02.10.2014 ರಂದು ಫ್ರಾಸಾ-2 ರವರು ಚಾಸಾ-1 ರವರ ಶರ್ಟ್ ನ್ನು ನಮ್ಮ ಠಾಣೆಯಲ್ಲಿ ಹಾಜರುಪಡಿಸಿದ್ದು, ನಂತರ ಪಂಚರ ಸಮಕ್ಷಮ ನಿಪಿ-3 ರಂತೆ ಮಹಜರ್ ಮಾಡಿ ಶರ್ಟನ್ನು ವಶಪಡಿಸಿಕೊಂಡಿರುತ್ತೇನೆ. ಸಾಕ್ಷಿಯು ನಿಪಿ-3 ರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದರಿಂದ, ಸಾಕ್ಷಿಯ ಸಹಿಯನ್ನು ನಿಪಿ-3(ಸಿ) ಎಂದು ಗುರುತಿಸಲಾಯಿತು. ನಾನು ವಶಪಡಿಸಿಕೊಂಡ ಶರ್ಟನ್ನು ನೋಡಿದರೆ ಗುರುತಿಸಿಸುತ್ತೇನೆ. ಸಾಕ್ಷಿಯು ಮುದ್ದೆ ಮಾಲು-1 ನ್ನು ನೋಡಿ ಗುರುತಿಸಿರುತ್ತಾರೆ. ತನಿಖೆ ಮುಂದುವರಿಸಿ ಚಾಸಾ-2 ರಿಂದ 5 ರವರ ಹೇಳಿಕೆ ಮತ್ತು ಚಾಸಾ-1 ಮತ್ತು 2 ರವರ ಮರು ಹೇಳಿಕೆ ಪಡೆದಿರುತ್ತೇನೆ.

ದಿನಾಂಕ 31.12.2014 ರಂದು ನಿಪಿ-8 ರಂತೆ ಗಾಯಾಳುವಿನ ದೃಡೀಕರಣ ಪತ್ರ ಪಡೆದಿರುತ್ತೇನೆ. ಸಾಕ್ಷಿಯು ನಿಪಿ-8 ರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದರಿಂದ, ಸಾಕ್ಷಿಯ ಸಹಿಯನ್ನು ನಿಪಿ-8(ಬಿ) ಎಂದು ಗುರುತಿಸಲಾಯಿತು.

ನಂತರ ಆರೋಪಿಗಳ ವಿರುದ್ಧ ಆರೋಪ ಸಾಬೀತಾದ್ದರಿಂದ ದೋಷಾರೋಪಣಾಪಟ್ಟಿ ಸಲ್ಲಿಸಿರುತ್ತೇನೆ.

**ಪಾಟೀ ಸವಾಲುಃ ಆರೋಪಿಗಳ ಪರ ಶ್ರೀ ಎಂ.ಆರ್, ವಕೀಲರಿಂದಃ**

ಘಟನೆ ನಡೆದ ಸ್ಥಳವನ್ನು ನೋಡಿರುತ್ತೇನೆ. ಸದರಿ ಸ್ಥಳದಲ್ಲಿ ರಸ್ತೆ ತುಂಬಾ ಕಿರಿದಾಗಿದ್ದು, ಬಸ್ ಗಳು ಓಡಾಡಲು ಕಷ್ಟವಾಗುತ್ತದೆ ಎಂದರೆ ಬಸ್ ಗಳು ಓಡಾಡುತ್ತವೆ.

ಸದರಿ ರಸ್ತೆಯಲ್ಲಿ ಏಕಕಾಲಕ್ಕೆ 2 ಬಸ್ ಗಳು ಓಡಾಡಲು ಸಾಧ್ಯವಿರುವುದಿಲ್ಲ ಎಂದರೆ ಸರಿ. ದನಗಳನ್ನು ಹಿಡಿದುಕೊಂಡು ಹೋಗುವಾಗ ಬಸ್ ಹತ್ತಿರ ಬಂದ ವಿಚಾರವಾಗಿ ಗಲಾಟೆಯಾಗಿರುತ್ತದೆ ಎಂದು ಗೊತ್ತಾಗಿರುತ್ತದೆ. ಆರೋಪಿಗಳು ದನಗಳನ್ನು ಹಿಡಿದುಕೊಂಡು ಹೋಗುವಾಗ ಚಾಸಾ-1 ರವರೇ ಬಸ್ ನ್ನು ವೇಗವಾಗಿ ಚಾಲನೆ ಮಾಡಿಕೊಂಡು ಹೋಗಿರುತ್ತಾರೆ ಎಂದರೆ ಸರಿಯಲ್ಲ. ಆರೋಪಿಗಳು ಏಕೆ ಬಸ್ಸನ್ನು ವೇಗವಾಗಿ ಚಾಲನೆ ಮಾಡಿಕೊಂಡು ಹೋಗುತ್ತಿದ್ದೀರಿ ಎಂದು ಕೇಳಿದ್ದಕ್ಕೆ ಚಾಸಾ-1 ರವರೇ ಆರೋಪಿಗಳ ಮೇಲೆ ಗಲಾಟೆ ಮಾಡಿರುತ್ತಾರೆ ಎಂದರೆ ಸರಿಯಲ್ಲ. ಘಟನೆ ನಡೆದ ಮರು ದಿವಸ ಮಹಜರ್ ಜರುಗಿಸಿರುತ್ತೇನೆ. ಸ್ಥಳದಲ್ಲಿ ಮಹಜರ್ ಮಾಡಿಲ್ಲ ಎಂದರೆ ಸರಿಯಲ್ಲ. ಚಾಸಾ-1 ರವರಿಗೆ ಅನುಕೂಲವಾಗಲೆಂದು ಠಾಣೆಯಲ್ಲಿಯೇ ಕುಳಿತು ಮಹಜರ್ ತಯಾರಿಸಿರುತ್ತೇನೆ ಎಂದರೆ ಸರಿಯಲ್ಲ. ಮುದ್ದೆ ಮಾಲು-1 ರಲ್ಲಿ ಯಾವುದೇ ರಕ್ತದ ಕಲೆ ಇರುವುದಿಲ್ಲ. ಮುದ್ದೆ ಮಾಲು-1 ನ್ನು ಈ ಪ್ರಕರಣಕ್ಕಾಗಿ ಸೃಷ್ಟಿಸಿರುತ್ತೇನೆ ಎಂದರೆ ಸರಿಯಲ್ಲ. ನಿಪಿ-8 ನ್ನು ಈ ಪ್ರಕರಣಕ್ಕೆ ಅನುಕೂಲವಾಗಲೆಂದು ನಾನೇ ಹೇಳಿ ಪಡೆದಿರುತ್ತೇನೆ ಎಂದರೆ ಸರಿಯಲ್ಲ. ನಾನು ಸಾಕ್ಷಿದಾರರ ಹೇಳಿಕೆ ಪಡೆದಿಲ್ಲ ಮತ್ತು ಸದರಿ ಹೇಳಿಕೆಗಳನ್ನು ನಾನೇ ಸೃಷ್ಟಿಸಿರುತ್ತೇನೆ ಎಂದರೆ ಸರಿಯಲ್ಲ. ಆರೋಪಿಗಳ ವಿರುದ್ಧ ಯಾವುದೇ ಸಾಕ್ಷ್ಯಾಧಾರಗಳು ಲಭ್ಯವಿಲ್ಲದಿದ್ದರೂ ಸುಳ್ಳು ಪ್ರಕರಣ ದಾಖಲಿಸಿ ಸುಳ್ಳು ದೋಷಾರೋಪಣಾಪಟ್ಟಿ ಸಲ್ಲಿಸಿರುತ್ತೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆ:** ಇರುವುದಿಲ್ಲ.

**(ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)**

**ಓ ಹೇ ಕೇ ಸಾ ಸ ಇ ಒ.,**

ಸಹಿ/–

**ಪ್ರಧಾನ ಸಿವಿಲ್ ನಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ.,**

**ನಂಜನಗೂಡು.**